## ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ. ರವರ ನ್ಯಾಯಾಲಯ, ನಂಜನಗೂಡು

**ಸಿಸಿ ಸಂಖ್ಯೆ: 8831/2022**

ಫಿರ್ಯಾದುದಾರರು : ಸರ್ಕಾರದ ಪರವಾಗಿ ಆರಕ್ಷಕ ಉಪ-ನಿರೀಕ್ಷಕರು,
ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣೆ,
ನಂಜನಗೂಡು.

ವಿರುದ್ಧ

ಆರೋಪಿಗಳು : ಶ್ರೀಧರ ಮತ್ತು ಇತರರು

:: ದೋಷಾರೋಪಣೆ ::

**ಶ್ರೀ ಸತೀಶ ಕೆ.ಜಿ., ಬಿ.ಎ., ಎಲ್.ಎಲ್.ಬಿ.,** ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ. ನಂಜನಗೂಡು ಆದ ನಾನು ಆರೋಪಿತರಾದ-

1) ಶ್ರೀಧರ ಬಿನ್ ಮೃತ ಮಾದಪ್ಪ,
ವಯಸ್ಸು ಸುಮಾರು 85 ವರ್ಷ,

2) ಶ್ರೀಮತಿ. ನಾಗಮ್ಮ ಕೋಂ ಮಂಜುನಾಥ,
ವಯಸ್ಸು ಸುಮಾರು 33 ವರ್ಷ,

3) ಶ್ರೀಮತಿ. ಶೋಭ ಕೋಂ ಕುಮಾರ,
ವಯಸ್ಸು ಸುಮಾರು 40 ವರ್ಷ,

4) ಶ್ರೀಮತಿ. ಮಂಗಳಮ್ಮ ಕೋಂ ನಾಗರಾಜು,
ವಯಸ್ಸು ಸುಮಾರು 50 ವರ್ಷ,

ನಂಜನಗೂಡು ತಾಲ್ಲೂಕಿನ ದೇವೀರಮ್ಮನಹಳ್ಳಿ ಗೇಟ್ ಗ್ರಾಮದ ನಿವಾಸಿಗಳಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆ:-

ಮೊದಲನೆಯದಾಗಿ, ದಿನಾಂಕ 29.03.2022 ರಂದು ಬೆಳಿಗ್ಗೆ 09.00 ಗಂಟೆ ಸಮಯದಲ್ಲಿ ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಗೆ ಸೇರಿದ ದೇವಿರಮ್ಮನಹಳ್ಳಿ ಗೇಟ್ ಹತ್ತಿರ ಚಾಸಾ-1-ಶ್ರೀ.ಮಹದೇವುರವರ ಟೀ ಅಂಗಡಿಯ ಬಳಿ ಚಾಸಾ-1 ರವರು ಟೀ ಕುಡಿಯುತ್ತ ನಿಂತಿದ್ದಾಗ, ಅಂಗಡಿಯ ಪಕ್ಕದ ಮನೆಯ ಆರೋಪಿಗಳಾದ ನೀವು ಚಾಸಾ-1 ರವರ ಅಂಗಡಿಯ ಮುಂದೆ ನಿಂತುಕೊಂಡು ಅಂಗಡಿಯ ಮಳಿಗೆಯ ವಿಚಾರದಲ್ಲಿ ಸಮಾನ ಉದ್ದೇಶದಿಂದ ಚಾಸಾ-1 ರವರ ಜೊತೆ ಜಗಳ ತೆಗೆದು ಚಾಸಾ-1 ರವರನ್ನು ಉದ್ದೇಶಿಸಿ "ಲೋಫರ್ ನನ್ನ ಮಗನೆ" ಎಂದು ಅವಾಚ್ಯ

ಶಬ್ದಗಳಿಂದ ಬೈದಿದ್ದು, ಆ ಮೂಲಕ ಚಾಸಾ-1 ರವರಿಗೆ ಉದ್ರೇಕವನ್ನುಂಟು ಮಾಡಿದರೆ ಅಂತಹ ಉದ್ರೇಕದಿಂದ ಅವರು ಕುಪಿತರಾಗಿ ಶಾಂತಿ ಭಂಗವನ್ನುಂಟು ಮಾಡಲೆಂಬ ಅಥವಾ ಯಾವುದೇ ಅಪರಾಧವನ್ನು ಮಾಡಬೇಕೆಂಬ ಉದ್ದೇಶದಿಂದ ಅವರನ್ನು ಅವಮಾನ ಪಡಿಸಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 504 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಎರಡನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ರವರ ಜೊತೆ ಜಗಳ ತೆಗೆದು, ಚಾಸಾ-1 ರವರು ಅಂಗಡಿಯಿಂದ ಹೊರಗೆ ಬಂದು ಏಕೆ ಈ ರೀತಿ ಬೈಯ್ಯುತ್ತಿದ್ದೀರಿ ಅಂಗಡಿ ಮಳಿಗೆಯನ್ನು ತನಗೆ ವ್ಯಾಪಾರ ಮಾಡಿ ಈ ರೀತಿ ಬೈಯ್ಯುತ್ತಿದ್ದಿರಲ್ಲ ಎಂದ ಕೇಳಿ ಅಂಗಡಿಯ ಒಳಗೆ ಹೋಗುತ್ತಿದ್ದಾಗ, ಆರೋಪಿಗಳಾದ ನೀವು ಚಾಸಾ-1 ರವರನ್ನು ಹಿಡಿದುಕೊಂಡು ಒಂದು ಎಲ್ಲೆಯಿಂದಾಚೆಗೆ ಮುಂದೆ ಹೋಗದಂತೆ ಅಕ್ರಮವಾಗಿ ಪ್ರತಿಬಂಧಿಸಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 341 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಮೂರನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ರವರ ಜೊತೆ ಜಗಳ ತೆಗೆದು, ಆರೋಪಿಗಳ ಪೈಕಿ 2 ನೇ ಆರೋಪಿಯಾದ ನೀವು ಹಲ್ಲಿನಿಂದ ಚಾಸಾ-1 ರವರ ಎಡ ಮುಂಗೈ ಕಚ್ಚಿದ್ದು, 3 ನೇ ಆರೋಪಿಯಾದ ನೀವು ಕೈಯಿಂದ ಚಾಸಾ-1 ರವರ ಮೈ ಕೈಗೆ ಹೊಡೆದು ನೋವುಂಟು ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 323 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ನಾಲ್ಕನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ರವರ ಜೊತೆ ಜಗಳ ತೆಗೆದು, ಆರೋಪಿಗಳ ಪೈಕಿ 1 ನೇ ಆರೋಪಿಯಾದ ನೀವು ಮಾರಕಾಯುಧವಾದ ದೊಣ್ಣೆಯಿಂದ ಚಾಸಾ-1 ರವರ ಮೈ-ಕೈಗೆ ಸ್ವ-ಇಚ್ಛೆಯಿಂದ ಹಲ್ಲೆ ಮಾಡಿ ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 324 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಕೊನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ,

ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ–1 ರವರ ಜೊತೆ ಜಗಳ ತೆಗೆದು, ಚಾಸಾ–1 ರವರನ್ನು ಉದ್ದೇಶಿಸಿ "ನೀನು ಬಚಾವಾದೆ, ಇಲ್ಲದಿದ್ದರೆ ನಿನ್ನನ್ನು ಕೊಲೆ ಮಾಡುತ್ತೇವೆ" ಎಂದು ಜೀವಬೆದರಿಕೆ ಹಾಕಿದ್ದು, ಆ ಮೂಲಕ ಚಾಸಾ–1 ರವರು ಹೆದರುವಂತೆ ಮಾಡಿ ಅವರು ಕಾನೂನು ಸಮ್ಮತವಾಗಿ ಮಾಡಬೇಕಾಗಿರುವ ಕೃತ್ಯವನ್ನು ಮಾಡದಂತೆ ಅಥವಾ ಕಾನೂನು ಸಮ್ಮತವಾಗಿ ಮಾಡಬಾರದ ಕೃತ್ಯವನ್ನು ಮಾಡುವಂತೆ ಅಪಾಯದ ಭೀತಿಯನ್ನು ಹುಟ್ಟಿಸಿ ಅಪರಾಧಿಕ ಭಯೋತ್ಪಾದನೆಯನ್ನು ಉಂಟು ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 506 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಪ್ರಶ್ನೆ:1– ಈ ಮೇಲೆ ಹೇಳಿದಂತೆ ನಿಮಗೆ ಓದಿ ಹೇಳಿ ವಿವರಿಸಿದ ದೋಷಾರೋಪಣೆಯನ್ನು ಅರ್ಥಮಾಡಿಕೊಂಡಿರುವಿರಾ?

1 ನೇ ಆರೋಪಿ ಉತ್ತರಃ 2 ನೇ ಆರೋಪಿ ಉತ್ತರಃ

3 ನೇ ಆರೋಪಿ ಉತ್ತರಃ 4 ನೇ ಆರೋಪಿ ಉತ್ತರಃ

ಪ್ರಶ್ನೆ:2– ಸದರಿ ಆರೋಪಣೆಗಳನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗಬೇಕೋ?

1 ನೇ ಆರೋಪಿ ಉತ್ತರಃ 2 ನೇ ಆರೋಪಿ ಉತ್ತರಃ

3 ನೇ ಆರೋಪಿ ಉತ್ತರಃ 4 ನೇ ಆರೋಪಿ ಉತ್ತರಃ

(ಆರೋಪಿಗಳಿಗೆ ತಿಳಿದಿರುವ ಕನ್ನಡ ಭಾಷೆಯಲ್ಲಿ ಈ ದೋಷಾರೋಪಣೆಯನ್ನು ಓದಿ ತಿಳಿಸಿ ಹೇಳಲಾಗಿ ಸದರಿ ಆರೋಪಿಗಳು ಹೇಳಿದ ಉತ್ತರಗಳನ್ನು ಯಥಾವತ್ತಾಗಿ ಬರೆದುಕೊಳ್ಳಲಾಯಿತ್ತೆಂದು ದೃಢೀಕರಿಸಿರುತ್ತೇನೆ.)

ದಿನಾಂಕಃ 01.04.2025.

(ಸತೀಶ. ಕೆ.ಜಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾದಂ. ನಂಜನಗೂಡು.